(ii) ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2000 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಸಿ. ಶ್ರೀ ಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ 2000 ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ 2000 ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್.ಸಿ. ಶ್ರೀ ಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ 2000 ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ (i) (ii)

(iii) ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗಧಿ ತಿದ್ದುಪಡಿ) ವಿಧೇಯಕ 2000 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗಧಿ (ತಿದ್ದುಪಡಿ) ವಿಧೇಯಕ 2000 ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, ಕರ್ನಾಟಕ ನ್ಯಾಯಾಲಯ ಫೀಜುಗಳು ಮತ್ತು ದಾವೆಗಳ ಮೌಲ್ಯ ನಿಗಧಿ (ತಿದ್ದುಪಡಿ) ವಿಧೇಯಕ 2000 ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ನ್ಯಾಯಾಲಯ ಫೀಜುಗಳ ಮತ್ತು ದಾವೆಗಳ ಮೌಲ್ಯ ನಿಗಧಿ (ತಿದ್ದುಪಡಿ) ವಿಧೇಯಕ 2000 ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ (i)&(ii)

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ, 2000

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) : ಮಾನ್ಯ ಅಧ್ಯಕ್ಷರೇ, 2000ದ ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.